# SPECIMEN

ಕ್ರಿಡ್ತಾಂತು ಕನ್ನಡ ಭಾಷಾ ಪರೀಕ್ಷೆ

## SECTION — A / ವಿಭಾಗ — A

**1. ಈ ಕೆಳಗಿನ ವಿಷಯವನ್ನು ಕುರಿತು 300 ಶಬ್ದಗಳಿಗೆ ಮೀರದಂತೆ ಪ್ರಬಂಧ ಬರೆಯಿರಿ.** **[25]**

ಹಳೆಯ ಸಂಸ್ಕೃತಿಯ ಅಳಿವು–ಉಳಿವು.

SPECIMEN

2\. ಕೆಳಗಿನ ಕಥಾಭಾಗವನ್ನು ಓದಿ ಕೊನೆಯಲ್ಲಿರುವ ಪ್ರಶ್ನೆಗಳಿಗೆ ನಿಮ್ಮ ಮಾತುಗಳಲ್ಲಿ ಉತ್ತರಿಸಿ.

ವಿವೇಕಾನಂದರೆಂದರೆ ಸಾಮಾಜಿಕ ಸಂಕಟ, ಸಿಟ್ಟು, ಸ್ಪಷ್ಟತೆಗಳ ರೂಪಕ. ಅವರು ಶಿಖರ ಚಿಂತಕ. ಅವರ ಆಲೋಚನೆಯಲ್ಲಿ ಗೊಂದಲಗಳಿಲ್ಲ, ಕೆಲವೊಮ್ಮೆ ವೈರುಧ್ಯದಂತೆ ಕಂಡರೂ ಅದು ಸಾಂದರ್ಭಿಕ ಪ್ರತಿಕ್ರಿಯೆಗಳ ಫಲ. ಅವರ ಎಲ್ಲಾ ವಿಚಾರಗಳನ್ನು ಒಟ್ಟಿಗೆ ನೋಡಿದಾಗ ಸ್ಪಷ್ಟ ನೋಟ ಕಾಣಿಸುತ್ತದೆ.

ದೈಹಿಕ ಹಸಿವನ್ನು ಹಿಂಗಿಸುವುದು ಅವರ ಮೊದಲ ಆದ್ಯತೆ ; ಆತ್ಮದ ಹಸಿವು, ವೇದಾಂತದ ಹಸಿವು, ಸಾಂಸ್ಥಿಕವಾದ ಧರ್ಮದ ಹಸಿವು, ಈ ಕಾರಣದಿಂದಾಗಿಯೇ ವಿವೇಕಾನಂದರು ಯಾವತ್ತೂ ಧಾರ್ಮಿಕ ಮೂಲಭೂತವಾದಿಯಾಗಿರಲಿಲ್ಲ. ಬದಲಾಗಿ ಧಾರ್ಮಿಕ ಮೂಲಭೂತವಾದಕ್ಕೆ ಉಗ್ರ ವಿರೋಧಿಯಾಗಿದ್ದರು. ಜಾತಿವಾದ ಮತ್ತು ಕೋಮುವಾದಕ್ಕೆ ಪ್ರತಿರೋಧವೊಡ್ಡಿದ್ದರು. ಹಿಂದೂ ಧರ್ಮದೊಳಗಿದ್ದೂ ಅದನ್ನು ಮೀರಿದ ಸಾಮಾಜಿಕ ಶಕ್ತಿಯಾದರು. ಆದ್ದರಿಂದ ಇಂದಿನ ಸನ್ನಿವೇಶದಲ್ಲಿ ಅವರು ಹೆಚ್ಚು ಪ್ರಸ್ತುತರು. ಈ ಅಂಶವನ್ನು ಮುಂದಿನಂತೆ ಮತ್ತಷ್ಟು ವಿವರಿಸಬಹುದು ; ಇಂದು ಜಾತಿವಾದ ಮತ್ತು ಕೋಮುವಾದಗಳು ಮುನ್ನೆಲೆಗೆ ಬಂದು ಮಾನವೀಯ ಮೌಲ್ಯವನ್ನು ನುಂಗಿ ನೊಣೆಯುತ್ತಿವೆ. ಸಮಾನತೆಯ ಆಶಯಗಳನ್ನು ತಪ್ಪಿತಸ್ಥ ಶಾಲಾ ಬಾಲಕರಂತೆ ಹಿಂದಿನ ಸಾಲಿನಲ್ಲಿ ಕೈಕಟ್ಟಿ ನಿಲ್ಲಿಸಲಾಗಿದೆ. ಬಡಜನರ ಪರವಾದ ಆದ್ಯತೆಗಳು ಪಲ್ಲಟಗೊಳ್ಳುತ್ತಿವೆ. ವಿವೇಕಾನಂದರಿಗೆ ಬಡಜನರ ಹೊಟ್ಟೆ ಹಸಿವನ್ನು ಹಿಂಗಿಸುವುದು ಮೊದಲ ಆದ್ಯತೆಯಾಗಿತ್ತು. ಆನಂತರ ಧರ್ಮ, ಜಾತಿವಾದದ ವಿಷಯಕ್ಕೆ ಬಂದರೆ ಹಿಂದುಳಿದ ಹಾಗೂ ದಲಿತ ಜಾತಿಗಳ ಬಗ್ಗೆ ಅವರಿಗೆ ಸಹಜವಾದ ಸಾಮಾಜಿಕ ಕಳಕಳಿಯಿತ್ತು. ಹೀಗಾಗಿಯೇ ಅವರು ಸಂಶಯಕ್ಕೆಡೆಯಿಲ್ಲದಂತೆ ಜಾತಿ ಮತ್ತು ವರ್ಗ ವ್ಯವಸ್ಥೆಯನ್ನು ವಿರೋಧಿಸಿದರು. ಅವರು "ಜಾತಿ ಎಂಬುದು ಸಮಾಜದ ಒಂದು ಆಂತರಿಕ ಭಾಗವಾಗಿದೆ. ಹಿಂದೆ ಅದು ವಿಕಾಸವಾಗುತ್ತಿತ್ತು. ಈಗ ಅದು ಘನೀಭೂತವಾಗಿದೆ. ಅದರ ದುರ್ಗಂಧದಿಂದ ಭಾರತದ ವಾತಾವರಣವೆಲ್ಲಾ ತುಂಬಿದೆ" ಎಂದು ಹೇಳಿದರು. ಜಾತಿ ವ್ಯವಸ್ಥೆಯ ಕ್ರೌರ್ಯಕ್ಕೆ ತುತ್ತಾಗಿ ಶೂದ್ರರು, ಅಸ್ಪೃಶ್ಯರು ಸ್ವಾತಂತ್ರ್ಯ ಹೀನರಾಗಿ ಗುಲಾಮತನ ಅನುಭವಿಸುವುದನ್ನು ಟೀಕಿಸುವ ವಿವೇಕಾನಂದರು ಶೂದ್ರವರ್ಗ ತನ್ನ ಊಳಿಗ ಸ್ವಭಾವವನ್ನು ಬಿಟ್ಟು ಹೊರಬರಬೇಕೆಂದು ಕರೆಕೊಡುತ್ತಾರೆ. ಮುಂದೊಮ್ಮೆ ಶೂದ್ರರು ತಮ್ಮ ಶೂದ್ರತ್ವದ ಶಕ್ತಿಯಿಂದಲೇ ಮೇಲೇಳುವ ಕಾಲ ಬರುತ್ತದೆ ಎಂದು ಭಾವಿಸುತ್ತಾರೆ ಮತ್ತು ವಿಶೇಷವೆಂದರೆ, ಮುಂದೆ ಬರುವುದು "ಸಮತವಾದ, ಅರಾಜಕವಾದ, ಶೂನ್ಯವಾದಗಳು ಮುಂದಾಗಲಿರುವ ಸಮಾಜ ಕ್ರಾಂತಿಯ ಅರುಣೋದಯ" ಎಂದು ಘೋಷಿಸಿದ್ದಾರೆ.

SPECIMEN

ಕೋಮುವಾದದ ವಿಷಯಕ್ಕೆ ಬಂದರೆ ವಿವೇಕಾನಂದರೆಂದೂ ಏಕಸಂಸ್ಕೃತಿ ಮತ್ತು ಏಕಧರ್ಮ ವಿಸ್ತರಣೆಗಳ ಪರವಾಗಿರಲಿಲ್ಲ. ಅದು ಹಿಂದೂ ಧರ್ಮವಿರಲಿ, ಕ್ರೈಸ್ತ ಧರ್ಮವಿರಲಿ, ಇಸ್ಲಾಂ ಧರ್ಮವಿರಲಿ, ಏಕಧರ್ಮ ಶ್ರೇಷ್ಠತೆ ಮತ್ತು ವಿಸ್ತರಣೆಯು ಜೀವ ವಿರೋಧವೆಂದು ಅವರು ಭಾವಿಸಿದ್ದರು ; 11-09-1893ರಂದು ಚಿಕಾಗೊದ ಸರ್ವಧರ್ಮ ಸಮ್ಮೇಳನದಲ್ಲಿ ಮಾತನಾಡುತ್ತ ಅವರು 'ಸ್ವಮತಾಭಿಮಾನ, ಅನ್ಯ ಮತದ್ವೇಷ ಮತ್ತು ಇವುಗಳಿಂದ ಉತ್ಪನ್ನವಾದ ಘೋರ ಧಾರ್ಮಿಕ ದುರಭಿಮಾನಗಳು ಈ ಸುಂದರ ಜಗತ್ತನ್ನು ಆವರಿಸಿಕೊಂಡಿವೆ. ಇಂತಹ ಉಗ್ರ ಧರ್ಮಾಂಧತೆಯ ದೈತ್ಯರಿಲ್ಲದೆ ಇದ್ದರೆ ಮಾನವ ಜನಾಂಗ ಇಂದಿಗಿಂತ ಎಷ್ಟೋ ಮುಂದುವರೆಯುತ್ತಿತ್ತು ಎಂದರು'. ಇನ್ನೊಮ್ಮೆ ಅವರು ಹೀಗೆ ಹೇಳಿದರು; "ಪ್ರತಿಯೊಬ್ಬರೂ ಒಂದೇ ಮಾರ್ಗವನ್ನು ಅನುಸರಿಸುವ ದುರ್ದಿನ ಪ್ರಪಂಚಕ್ಕೆ ಬಾರದಿರಲಿ. ಈಗ ಧರ್ಮ ಮತ್ತು ಆಧ್ಯಾತ್ಮಿಕ ಭಾವನೆ ನಾಶವಾಗುವುದು. ವೈವಿಧ್ಯವೇ ಜೀವನದ ರಹಸ್ಯ.... ನಾವು ಎಲ್ಲ ಧರ್ಮಗಳಿಗೂ ಗೌರವವನ್ನು ತೋರಬೇಕು."

ವಿವೇಕಾನಂದರ ಧಾರ್ಮಿಕ ಚಿಂತನೆಗಳನ್ನು ಅವಲೋಕಿಸಿದಾಗ ಅವರು ಸ್ಪಷ್ಟವಾಗಿ ಕೋಮುವಾದ ವಿರೋಧಿಯಾಗಿದ್ದರೆಂದು ತಿಳಿದು ಬರುತ್ತದೆ. ಕೋಮುವಾದವು ಏಕಧರ್ಮ ಮತ್ತು ಏಕ ಸಂಸ್ಕೃತಿಯೇ ಶ್ರೇಷ್ಠವೆಂದೂ ಅದೇ ಅಂತಿಮವೆಂದೂ ನಂಬುತ್ತಾ, ಪರಮಧರ್ಮ ದ್ವೇಷವನ್ನು ಬಿತ್ತಿ ಬೆಳೆಸುತ್ತದೆ. ಇಂತಹ ಪ್ರವೃತ್ತಿಗೆ ವಿವೇಕಾನಂದರು ಕಟ್ಟಾ ವಿರೋಧಿಯಾಗಿದ್ದರು. ಕುವೆಂಪು ಅವರು ಹೇಳುವಂತೆ ಅವರು 'ಮಾನವತಾ ಮಿತ್ರರಾಗಿದ್ದರು. ಮನುಷ್ಯತ್ವದ ಮಹಿಮೆಯನ್ನು ಎಂದಿಗೂ ಮರೆಯಬೇಡಿ. ನಮಗಿಂತಲೂ ಬೇರೆಯಾದ ದೇವರು ಹಿಂದೆ ಇರಲಿಲ್ಲ. ಮುಂದೆ ಬರುವುದಿಲ್ಲ. ಕ್ರೈಸ್ತ, ಬುದ್ಧ, ಕೃಷ್ಣ, ರಾಮರೆಲ್ಲಾ ಅಹಮಸ್ಮಿ ಎಂಬ ಮಹಾವಾರಿಧಿಯ ತರಂಗಗಳು ಮಾತ್ರ' ಎಂದು ಘೋಷಿಸಿದರು.

ವಿವೇಕಾನಂದರ 'ಧೀರೋದಾತ್ತ' ನಿಲುವುಗಳು ವೈಯಕ್ತಿಕ ಮಾತ್ರವಾಗದೆ ಸಾಮಾಜಿಕವಾಗಿ ರೂಪಾಂತರಗೊಂಡು ಗಟ್ಟಿಯಾದದ್ದೇ ಅವರ ವ್ಯಕ್ತಿತ್ವದ ವಿಶೇಷ : ಅವರದು ಪ್ರಖರ ಸಾಮಾಜಿಕ ವ್ಯಕ್ತಿತ್ವ. ದೀನದಲಿತರ ಉದ್ಧಾರವೇ ಅವರ ಧರ್ಮದ ಮೊದಲ ತತ್ವ ; ಅದೇ ಅವರ ವೈಚಾರಿಕ ಸತ್ವ. ಆದ್ದರಿಂದ ವಿವೇಕಾನಂದರು ಇಂದಿಗೂ ಸತ್ಯ.

# SPECIMEN

ಈ ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ. [5 × 5 = 25]

**(a)** ಸ್ವಾಮಿ ವಿವೇಕಾನಂದರ ಮೊದಲ ಆದ್ಯತೆ ಏನು?

ಉತ್ತರ: ______________________________

**(b)** ಸ್ವಾಮಿ ವಿವೇಕಾನಂದರ ವಿಚಾರಗಳ ಆಶಯವೇನು?

ಉತ್ತರ: ______________________________

**(c)** 'ಸಮಾಜ ಕ್ರಾಂತಿಯ ಅರುಣೋದಯ' ಈ ಉಕ್ತಿಯ ಮರ್ಮವೇನು?

ಉತ್ತರ: ______________________________

**(d)** ಸ್ವಾಮಿ ವಿವೇಕಾನಂದರು ಯಾವುದರ ವಿರೋಧಿಯಾಗಿದ್ದರು?

ಉತ್ತರ: ______________________________

**(e)** ಒಟ್ಟಾರೆ ವಿವೇಕಾನಂದರ ವಿಚಾರಗಳ ಪ್ರಸ್ತುತತೆಯನ್ನು ಕುರಿತು ಬರೆಯಿರಿ.

ಉತ್ತರ: ______________________________